10

ಇಲಾಖೆ / ವಿಷಯ : DEPARTMENT / SUBJECT: ಕೃಷಿ ಇಲಾಖೆ.

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 2/1/2021

# ಎಪಿಎಂಸಿ ತಿದ್ದುಪಡಿ ಮಸೂದೆಗೆ ರಾಜ್ಯಪಾಲ ವಾಲಾ ಅಂಕಿತ

## ಇನ್ನು ರೈತರು ಎಲ್ಲಿಯೂ ಉತ್ಪನ್ನ ಮಾರಬಹುದು

**ಬೆಂಗಳೂರು:** ವಿಪಕ್ಷಗಳು ಹಾಗೂ ರೈತರ ತೀವ್ರ ವಿರೋಧದ ನಡುವೆಯೇ ಡಿ.9 ರಂದು ವಿಧಾನಪರಿಷತ್‌ನಲ್ಲಿ ಅಂಗೀಕರಿಸಿದ 'ಕರ್ನಾಟಕ ಕೃಷಿ ಉತ್ಪನ್ನಗಳ ಮಾರುಕಟ್ಟೆ ವ್ಯವಹಾರ (ನಿಯಂತ್ರಣ-ಅಭಿವೃದ್ಧಿ ) ಕಾಯಿದೆ - 2020' ವಿಧೇಯಕಕ್ಕೆ (ಎಪಿಎಂಸಿ ತಿದ್ದುಪಡಿ) ರಾಜ್ಯಪಾಲ ವಿ.ಆರ್. ವಾಲಾ ಅವರು ಅಂಕಿತ ಹಾಕಿದ್ದಾರೆ.

ಈ ಮೂಲಕ ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಎಲ್ಲಿ ಬೇಕಾದರೂ ಮಾರುವ ಹಾಗೂ ಖರೀದಿದಾರರು ಮುಕ್ತವಾಗಿ ಖರೀದಿಸುವ ಎಪಿಎಂಸಿ ತಿದ್ದುಪಡಿ ಕಾಯಿದೆ ಅನುಷ್ಠಾನಗೊಂಡಂತಾಗಿದೆ. 1966ರ ಕಾಯಿದೆ ತಿದ್ದುಪಡಿ ಮಾಡಿದ್ದು ಕಾಯಿದೆಯ 27 (2) ನಿಯಮದ ಪ್ರಕಾರ ಮಾರುಕಟ್ಟೆಯ ಸಮಿತಿಯು ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಧಿಸೂಚಿತಕೃಷಿಉತ್ಪನ್ನಗಳಮಾರಾಟವನ್ನು ನಿಯಂತ್ರಿಸಬೇಕು ಎಂಬ ನಿಯಮವನ್ನು ಉಳಿಸಿಕೊಳ್ಳಲಾಗಿದೆ. ಆದರೆ, 27(3) ನಿಯಮವನ್ನು ಕೈ ಬಿಟ್ಟಿದ್ದು, ಮಾರುಕಟ್ಟೆ ಪ್ರಾಂಗಣದ ಹೊರಗಡೆ ನಡೆಯುವ ಕೃಷಿ ಉತ್ಪನ್ನ ಮಾರಾಟ ಅಥವಾ ವಹಿವಾಟು ನಿಯಂತ್ರಿಸುವ ಹಕ್ಕನ್ನು ಮಾರುಕಟ್ಟೆ ಸಮಿತಿಗಳಿಂದ ಕಿತ್ತುಕೊಳ್ಳಲಾಗಿದೆ. 117ನೇ ನಿಯಮದ ತಿದ್ದುಪಡಿಯಂತೆ ಎಪಿಎಂಸಿ ಮಾರುಕಟ್ಟೆಗಳಲ್ಲದೆ ಯಾವುದೇ ವ್ಯಕ್ತಿ ಸ್ಥಳೀಯ ನಿಯಮಗಳನ್ನು ಪಾಲಿಸಿ ಮಾರುಕಟ್ಟೆ ಸ್ಥಳವನ್ನು ಸೃಷ್ಟಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.